ದಿ: ೦೨.೦೭.೨೦೨೨ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ಪ್ರತಿವಾದಿ ಪರವಾಗಿ ಶ್ರೀ ಡಿ.ಎಲ್.ಎಸ್ ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ಜಡಿಗೇನಹಳ್ಳಿ, ಮಂಡಲ ಪಂಚಾಯ್ತಿ ಇವರು ಎಂಡ್ರಿಕಾಯಿವುಡ್ಡಿ ಗ್ರಾಮದ ನಿವೇಶನ ನಂ.೨೯ ನೇದಕ್ಕೆ ನೀಡಿದ ಹಕ್ಕು ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧ ಎಂದು, ೧೯೯೩-೯೪ನೇ ಸಾಲಿನ ತೆರಿಗೆ ವಿಧಿಸುವ ಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨ ಎಂದು, ಡಿಮ್ಯಾಂಡ್ ರಿಜಿಸ್ಟರ್‌ನ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೩ ಎಂದು, ೧೯೯೫-೯೬ನೇ ಸಾಲಿನ ತೆರಿಗೆ ವಿಧಿಸುವ ಪಟ್ಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೪ ಎಂದು, ಡಿಮ್ಯಾಂಡ್ ರಿಜಿಸ್ಟರ್ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೫ ಎಂದು, ೨೦೦೩-೦೪ನೇ ಸಾಲಿನ ಸ್ವಯಂ ಆಸ್ತಿ ತೆರಿಗೆ ಘೋಷಣಾ ಪಟ್ಟಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೬ ಎಂದು, ೨೦೧೪ನೇ ಸಾಲಿನ ತೆರಿಗೆ ರಿಜಿಸ್ಟರ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೭ ಎಂದು, ೨೦೧೪-೧೫ನೇ ಸಾಲಿನ ಆಸ್ತಿ ತೆರಿಗೆ ನಿರ್ಧರಣ ನಮೂನೆಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೮ ಎಂದು, ೨೦೧೫ನೇ ಸಾಲಿನ ತೆರಿಗೆ ರಿಜಿಸ್ಟರ್ ಅನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೯ ಎಂದು, ೨೦೧೬ನೇ ಸಾಲಿನ ನಮೂನೆ ೩ ನೇದನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧೦ ಎಂದು, ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧೧ ರಿಂದ ೧೭ ಎಂದು, ಕಂದಾಯ ಅಧೀಕಾರಿ ನಗರಸಭೆ, ಹೊಸಕೋಟೆ ಇವರು ನೀಡಿರುವ ತೆರಿಗೆ ನಿರ್ಧರಣ ಆದೇಶದ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧೮ ಎಂದು, ಮುಖ್ಯಾಧೀಕಾರಿ ಪುರಸಭೆ ಹೊಸಕೋಟೆ ಇವರು ನೀಡಿರುವ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೧೯ ಎಂದು, ಗ್ರಾಮಾ ಠಾಣಾ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೦ ಎಂದು, ಶೌಚಾಲಯ ನಿರ್ಮಾಣದ ಧನ ಸಹಾಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೧ ಎಂದು, ಪುರಸಭೆ ಕಾರ್ಯಾಲಯ ಇವರು ದಿ: ೧೫.೦೩.೨೦೦೪ರಂದು ನೀಡಿರುವ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೨ ಎಂದು, ಕಟ್ಟಡದ ಪರವಾನಿಗೆ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೩ ಎಂದು, ದಾವಾ ಆಸ್ತಿಯ ನಮೂನೆ ೩ ನೇದನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೪ ಎಂದು, ಕಾರ್ಯದರ್ಶಿ ಗ್ರಾಮಾ ಪಂಚಾಯ್ತಿಯವರು ನೀಡಿರುವ ನಕಾಶೆಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೫ ಎಂದು, ನಮೂನೆ ೧೬ ರ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೬ ಎಂದು, ನಿವೇಶನ ನಂ.೧೩೯/೯೯ ನೇದರ ೨೦೦೮-೦೯ನೇ ಸಾಲಿನ ಆಸ್ತಿ ತೆರಿಗೆ ರಿಜಿಸ್ಟರ್ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೭ ಎಂದು, ಮುಖ್ಯೋಪಾದ್ಯಯರು ಸರ್ಕಾರಿ ಹಿರಿಯ ಪ್ರಾರ್ಥಮಿಕ ಶಾಲೆ ಹೊಸಕೋಟೆ ಇವರು ನೀಡಿರುವ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಡಿ.೨೮ ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಡಿ.ಎಲ್.ಎಸ್ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**

ದಿ: ೦೯.೧೨.೨೦೨೧ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ :ವಾದಿ ಪರವಾಗಿ ಶ್ರೀ ಕೆ.ಆರ್. ವಕೀಲರಿಂದ.

ಇಂದು ನಾನು ಮಾನ್ಯ ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ ಮತ್ತು ಸದ್ರಿ ಅಂಶಗಳನ್ನು ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ.

(ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಶ್ರೀ ಸಿ.ಎನ್.ಎನ್ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**